# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಜೆ.ಎಸ್, ಸೋಮಶೇಖರ್, ವಿಚಾರಣಾಧಿಕಾರಿಗಳು ಹಾಗೂ ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರಿಗೆ - ಸಂಭಾವನೆ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂ. ಗ್ರಾಕುಪ 104 ಇಎನ್‌ಕ್ಯೂ 2019, ದಿನಾಂಕ:08.04.2020.
2. ವಿಚಾರಣಾಧಿಕಾರಿಯವರ ವರದಿ ದಿನಾಂಕ: 15.10.2021
3. ಸರ್ಕಾರದ ಆದೇಶ ಸಂ. ಸಿಆಸುಇ 11 ಸೇಇವಿ 2019 ದಿನಾಂಕ: 24.04.2019

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ:08.04.2020 ರ ಆದೇಶದಲ್ಲಿ ಮುಖ್ಯ ಶ್ರೀ ವಿ.ಮಹೇಶ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ, ಉಪವಿಭಾಗ, ಹೆಚ್.ಡಿ.ಕೋಟೆ (ಹಾಲಿ ನಿವೃತ್ತ ಕಾರ್ಯಪಾಲಕ ಇಂಜಿನಿಯರ್) ಇವರು ಮೊದಲನೇ ಹೆಂಡತಿ ಇದ್ದರೂ ಸಹ ಶ್ರೀಮತಿ ಎಸ್.ಮಮತ, ಮೈಸೂರು ಇವರನ್ನು ಎರಡನೇ ವಿವಾಹವಾಗಿರುವುದು ಹಾಗೂ ಸದರಿಯವರ ನಿವಾಸದ ಮೇಲೆ ರೆಪ್ಕೊ ಬ್ಯಾಂಕಿನಿಂದ ರೂ.20.00 ಲಕ್ಷಗಳ ಸಾಲವನ್ನು ಪಡೆದು ವೈಯಕ್ತಿಕ ಉದ್ದೇಶಗಳಿಗೆ ಬಳಸಿಕೊಂಡು ಕರ್ತವ್ಯ ಲೋಪವೆಸಗಿರುವ ಆರೋಪಕ್ಕೆ ಸಂಬಂಧಿಸಿದಂತೆ ಸದರಿಯವರ ವಿರುದ್ಧ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಶ್ರೀ ಜೆ.ಎಸ್, ಸೋಮಶೇಖರ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆ ಜರುಗಿಸಿ ಮೇಲೆ ಓದಲಾದ ಕ್ರಮ ಸಂಖ್ಯೆ (2)ರಂತೆ ದಿನಾಂಕ:15.10.2021 ರಂದು ವಿಚಾರಣಾ ವರದಿ ಸಲ್ಲಿಸಿರುತ್ತಾರೆ. ಮೇಲೆ ಓದಲಾದ ಕ್ರಮ ಸಂಖ್ಯೆ:(3)ರ ದಿನಾಂಕ:24.04.2019ರ ಆದೇಶದ ಕ್ರಮ ಸಂಖ್ಯೆ: (ಅ)ನಲ್ಲಿ ಏಕವ್ಯಕ್ತಿ ಆರೋಪಿತರಾಗಿರುವ ಜಂಟಿ ಇಲಾಖಾ ವಿಚಾರಣೆಗಳಿಗೆ ವಿಚಾರಣಾಧಿಕಾರಿಯಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ. 30,000/-ಗಳ ಸಂಭಾವನೆಯನ್ನು ಪಾವತಿಸಲು ತಿಳಿಸಲಾಗಿದೆ. ಹಾಗಾಗಿ ವಿಚಾರಣಾಧಿಕಾರಿಯವರಿಗೆ ನಿಯಮಾನುಸಾರ ಸಂಭಾವನೆ / ಭತ್ಯೆ ಮಜೂರು ಮಾಡಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ: ಗ್ರಾಕುಪ 104 ಇಎನ್‌ಕ್ಯೂ 2019 ಬೆಂಗಳೂರು,**
**ದಿನಾಂಕ:24.02.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ಜೆ.ಎಸ್, ಸೋಮಶೇಖರ್, ವಿಚಾರಣಾಧಿಕಾರಿಗಳು ಹಾಗೂ ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರು ಸರ್ಕಾರದ ಆದೇಶದಂತೆ ಇಲಾಖಾ ವಿಚಾರಣೆ ಜರುಗಿಸಿ ವರದಿ ಸಲ್ಲಿಸಿರುವುದರಿಂದ ಸರ್ಕಾರದ ಆದೇಶ ಸಂ. ಸಿಆಸುಇ 11 ಸೇಇವಿ 2019 ದಿನಾಂಕ:24.04.2019 ರ ಅನುಸಾರ ಸಂಚಿತ ಸಂಭಾವನೆ ರೂ. 30,000-00 (ಮೂವತ್ತು ಸಾವಿರ ರೂ.ಗಳು ಮಾತ್ರ)ಗಳನ್ನು (ವಾಹನ ಭತ್ಯೆಯೂ ಸೇರಿದಂತೆ) ಮಂಜೂರು ಮಾಡಿದೆ.

..2

ಸದರಿ ಮೊತ್ತವನ್ನು ಪಾವತಿಸಲು ಕೂಡಲೇ ಕ್ರಮವಹಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರಿಗೆ ತಿಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶದ ಅನುಸಾರ
ಮತ್ತು ಅವರ ಹೆಸರಿನಲ್ಲಿ,

24/2

**(ಕೆ.ನದೀಮ್ ಅಹ್ಮದ್)**
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

24-02-2022

**ಇವರಿಗೆ :**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 &2) / (ಆಡಿಟ್).
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು - ಸದರಿ ವಿಚಾರಣಾಧಿಕಾರಿಯವರ ಹೆಸರಿಗೆ ಚೆಕ್‌ನ್ನು ಬರೆದು ಅವರ ವಿಳಾಸಕ್ಕೆ ನೋಂದಣಿ ಅಂಚೆ ಮುಖಾಂತರ ಕಳುಹಿಸುವಂತೆ ಕೋರಿದೆ.
4. ಶ್ರೀ ಜೆ.ಎಸ್, ಸೋಮಶೇಖರ್, ವಿಚಾರಣಾಧಿಕಾರಿಗಳು ಹಾಗೂ ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ.1327, 11ನೇ ಮುಖ್ಯ ರಸ್ತೆ, ಜುಡಿಷಿಯಲ್ ಬಡಾವಣೆ, ಜಿಕೆವಿಕೆ ಪೋಸ್ಟ್, ಬೆಂಗಳೂರು-560065 (ಮೊ. ನಂ.9449162238)

**ಪ್ರತಿ ಮಾಹಿತಿಗಾಗಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಉಪ ಕಾರ್ಯದರ್ಶಿಗಳು, (ಆಡಳಿತ-1) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಶಾಖೆ
3. ಶಾಖಾ ರಕ್ಷಾ ಕಡತ / ವೆಬ್ ಸೈಟ್ ನಲ್ಲಿ ಪ್ರಕಟಿಸಲು.